ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಆಗಸ್ಟ್ 11, 2020

**ಪತ್ರಿಕಾ ಪ್ರಕಟಣೆ**

**ಕೋವಿಡ್ 19 ನಿರ್ವಹಣೆ ಕುರಿತು 10 ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಪ್ರಧಾನಮಂತ್ರಿಗಳ ವೀಡಿಯೋ ಸಂವಾದ**

**ಬೆಂಗಳೂರು, ಆಗಸ್ಟ್ 11( ಕರ್ನಾಟಕ ವಾರ್ತೆ ) :**

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಇಂದು ಕೋವಿಡ್ 19 ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ರಿಯ ಪ್ರಕರಣಗಳು ಹೆಚ್ಚಿರುವ 10 ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಇಂದು ವೀಡಿಯೋ ಸಂವಾದ ನಡೆಸಿದರು.

ಪ್ರಧಾನಮಂತ್ರಿಗಳು ಮಾತನಾಡಿ, ಕೋವಿಡ್ ಹೆಚ್ಚಾಗಿರುವ ರಾಜ್ಯಗಳಲ್ಲಿ ವಸ್ತುಸ್ಥಿತಿಯ ಬಗ್ಗೆ ಮಾಹಿತಿ ಪಡೆಯಲು ಈ ಸಭೆಯನ್ನು ಕರೆಯಲಾಯಿತು. ಪ್ರತಿ ರಾಜ್ಯವೂ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದ್ದು, ತಂಡಸ್ಪೂರ್ತಿಯೊಂದಿಗೆ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಒಟ್ಟಾಗಿ ಈ 10 ರಾಜ್ಯಗಳಲ್ಲಿ ಕೊರೋನಾವನ್ನು ಸಮರ್ಥವಾಗಿ ಎದುರಿಸಿದರೆ, ದೇಶವೇ ಈ ಹೋರಾಟದಲ್ಲಿ ಗೆದ್ದಂತೆ. ಸಾಂಕ್ರಾಮಿಕವನ್ನು ಗುರುತಿಸಿ, ತಡೆಗಟ್ಟುವಲ್ಲಿ ಉತ್ತಮ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದ ಅವರು, ಸಕ್ರಿಯ ಪ್ರಕರಣಗಳ ಸಂಖ್ಯೆ ಹಾಗೂ ಗುಣಮುಖರಾಗುತ್ತಿರುವವರ ಸಂಖ್ಯೆ ಕಡಿಮೆಯಾಗುತ್ತಿರುವುದು ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ ಹಾಗೂ ಜನರಲ್ಲಿ ಭೀತಿಯೂ ಕಡಿಮೆ ಮಾಡಿದೆ ಎಂದರು.

ಮರಣ ಪ್ರಮಾಣವನ್ನು ಶೇ. ಒಂದಕ್ಕಿಂತ ಕಡಿಮೆ ಮಾಡಲು ನಾವು ಶ್ರಮಿಸಬೇಕಿದೆ. ಸಂಪರ್ಕ ಪತ್ತೆ, ಪರೀಕ್ಷೆ ಹಾಗೂ ಸರ್ವೇಕ್ಷಣಾ ವ್ಯವಸ್ಥೆ ಕರೋನಾ ನಿಯಂತ್ರಣದಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಪ್ರಾರಂಭದಲ್ಲಿಯೇ ರೋಗ ಪತ್ತೆ ಮಾಡಿದಲ್ಲಿ ಸಾಂಕ್ರಾಮಿಕವನ್ನು ತಡೆಗಟ್ಟಲು ಸಾಧ್ಯವಿದೆ. 72 ಗಂಟೆಗಳೊಳಗಾಗಿ ಸೋಂಕಿತರನ್ನು ಹಾಗೂ ಅವರ ಸಂಪರ್ಕಿತರನ್ನು ಪತ್ತೆ ಮಾಡುವ ವ್ಯವಸ್ಥೆ ಕಲ್ಪಿಸಬೇಕಿದೆ ಎಂದರು.

ಉಪಮುಖ್ಯಮಂತ್ರಿ ಡಾ: ಅಶ್ವಥ್‌ನಾರಾಯಣ್, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಹಾಗೂ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

**ರಾಜ್ಯದಲ್ಲಿ ಕೋವಿಡ್ ನಿರ್ವಹಣೆಯ ಕುರಿತು ವೈದ್ಯಕೀಯ ಶಿಕ್ಷಣ ಸಚಿವ ಡಾ: ಕೆ.ಸುಧಾಕರ್ ಮಾಹಿತಿ ಒದಗಿಸಿದರು.**

ಸಭೆಯ ಮುಖ್ಯಾಂಶಗಳು:

ರಾಜ್ಯದಲ್ಲಿ ಸರ್ವೇಕ್ಷಣೆ, ಪತ್ತೆ ಹಾಗೂ ರೋಗ ಹರಡುವಿಕೆಯನ್ನು ತಡೆಗಟ್ಟಲು ಹಾಗೂ ಜಾಗೃತಿ ಮೂಡಿಸುವ ಕಾರ್ಯಗಳನ್ನು ಕೈಗೊಳ್ಳಲು ಬೂತ್ ಮಟ್ಟದ ತಂಡಗಳನ್ನು ರಚಿಸಲಾಗಿದೆ. ಎಂದು ವಿವರಿಸಿದರು.

ಪ್ರತಿದಿನ ಕೋವಿಡ್ ಪರೀಕ್ಷೆಯನ್ನು 20,000 ದಿಂದ 50 ಸಾವಿಕ್ಕೆ ಹೆಚ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಈ ಸಂಖ್ಯೆಯನ್ನು 75 ಸಾವಿರಕ್ಕೆ ಹೆಚ್ಚಿಸಲು ಯೋಜಿಸಲಾಗಿದೆ.
ರಾಜ್ಯದಲ್ಲಿ ಐ.ಸಿ.ಎಂ.ಆರ್ ಅನುಮೋದಿತ 100 ಪ್ರಯೋಗಾಲಯಗಳಿದ್ದು, 1300 ಮೊಬೈಲ್ ಪರೀಕ್ಷಾ ತಂಡಗಳನ್ನು ನಿರ್ಬಂಧಿತ ಸ್ಥಳಗಳು ಹಾಗೂ ಬಫರ್ ವಲಯಗಳಲ್ಲಿ ನಿಯೋಜಿಸಲಾಗಿದೆ.

ರೋಗ ಲಕ್ಷಣಗಳಿಲ್ಲದ ಪ್ರಕರಣಗಳನ್ನು ಗೃಹಗಳಲ್ಲಿ ನಿಬಂಧಿಸಲಾಗಿದ್ದು, ಅವರನ್ನು ಟೆಲಿ ಮಾನಿಟರಿಂಗ್ ಮೂಲಕ ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ಹಾಗೂ ಆರೋಗ್ಯ ತಂಡಗಳೂ ಭೇಟಿ ನೀಡುತ್ತಿದ್ದಾರೆ.

43 ಖಾಸಗಿ ವೈದ್ಯಕೀಯ ಕಾಲೇಜುಗಳು ಹಾಗೂ 17 ಸರ್ಕಾರಿ ಕಾಲೇಜುಗಳು ಸೇರಿದಂತೆ ಶೇ 50 ರಷ್ಟು ಹಾಸಿಗೆಗಳನ್ನು ಖಾಸಗಿ ಆಸ್ಪತ್ರೆಗಳಲ್ಲಿ ಕೋವಿಡ್ ಸೋಂಕಿತ ಚಿಕಿತ್ಸೆಗೆ ಮೀಸಲಿಡಲಾಗಿದೆ

ಕರ್ನಾಟಕ ಸರ್ಕಾರ ಎಲ್ಲ ಸೋಂಕಿತರ ಪರೀಕ್ಷೆ ಹಾಗೂ ಚಿಕಿತ್ಸೆಯ ವೆಚ್ಚವನ್ನು ಖಾಸಗಿ ಆಸ್ಪತ್ರೆಗಳಿಂದ ಶಿಫಾರಸ್ಸಾಗಿ ಬಂದ ಪ್ರಕರಣಗಳನ್ನೂ ಒಳಗೊಂಡಂತೆ ಭರಿಸುತ್ತಿದೆ.
ಈಗಾಗಲೇ ಅಸ್ತಿತ್ವದಲ್ಲಿರುವ 1,04,000 ಹಾಸಿಗೆಗಳ ಜೊತೆಗೆ 10,100 ಹಾಸಿಗೆಗಳ ಸಾಮರ್ಥ್ಯವನ್ನು ಹೊಂದಿದ ಕೋವಿಡ್ ಕೇರ್ ಸೆಂಟರ್ ಅನ್ನು ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಸ್ಥಾಪಿಸಲಾಗಿದೆ.

ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ಲಭ್ಯವಿರುವ 5500 ಆಕ್ಸಿಜನ್ ಬೆಡ್‌ಗಳೊಂದಿಗೆ 1600 ಬೆಡ್‌ಗಳನ್ನು ಸೇರ್ಪಡೆಗೊಳಿಸಲಾಗಿದೆ. ಆಗಸ್ಟ್ ಅಂತ್ಯದ ವೇಳೆಗೆ 5000 ಬೆಡ್‌ಗಳು ಲಭ್ಯವಾಗಲಿದೆ. ಸೆಪ್ಟೆಂಬರ್ ಅಂತ್ಯದಲ್ಲಿ ಒಟ್ಟು 20 ಸಾವಿರ ಆಕ್ಸಿಜನೇಟೆಡ್ ಬೆಡ್‌ಗಳು ಉಪಯೋಗಕ್ಕೆ ಲಭ್ಯವಾಗಲಿದೆ.

ರಾಜ್ಯದಲ್ಲಿ ಆಂಬ್ಯುಲೆನ್ಸ್‌ಗಳ ಸಂಖ್ಯೆಯನ್ನು 800 ರಿಂದ 2000 ಕ್ಕೆ ಹೆಚ್ಚಿಸಲಾಗಿದೆ. ಸಾಮಾಜಿಕ ಅಂತರ ಹಾಗೂ ಮಾಸ್ಕ್ ಧರಿಸುವ ನಿಯಮವನ್ನು ಉಲ್ಲಂಘಿಸಿದ 2,05,029 ಪ್ರಕರಣಗಳನ್ನು ದಾಖಲಿಸಿದ್ದು 6.65 ಕೋಟಿ ರೂ.ಗಳ ದಂಡವನ್ನು ಸಂಗ್ರಹಿಸಲಾಗಿದೆ.
ಗೃಹ ನಿರ್ಬಂಧ ಉಲ್ಲಂಘಿಸಿದ 3246 ವ್ಯಕ್ತಿಗಳನ್ನು ಮನೆಯಿಂದ ಸಾಂಸ್ಥಿಕ ಕ್ವಾರಂಟೈನ್‌ಗೆ ಸ್ಥಳಾಂತರಿಸಲಾಗಿದೆ. 5821 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಮರಣ ಪ್ರಮಾಣವನ್ನು ಕಡಿತಗೊಳಿಸುವುದು ನಮ್ಮ ಆದ್ಯತೆಯಾಗಿದ್ದು, ಈ ಸಂಬಂಧ ಪರೀಕ್ಷಾ ಪ್ರಮಾಣದಲ್ಲಿ ಹೆಚ್ಚಳ, ಸ್ಯಾಂಪಲ್ ಸಂಗ್ರಹ ಮತ್ತು ತ್ವರಿತ ಫಲಿತಾಂಶಗಳನ್ನು ಒದಗಿಸುವುದು ಹಾಗೂ ಮನೆಯಿಂದ ಆಸ್ಪತ್ರೆಗೆ ಸ್ಥಳಾಂತರವಾಗುವ ಸಮಯದಲ್ಲಿ ಕಡಿತ – ಇವೆಲ್ಲ ಕ್ರಮಗಳಿಂದ ಮರಣ ಪ್ರಮಾಣವನ್ನು ಆಗಸ್ಟ್ ವೇಳೆಗೆ 1.8 ಗೆ ಇಳಿಸಲಾಗಿದೆ.

ಒಟ್ಟು 182354 ಪ್ರಕರಣಗಳ ಪೈಕಿ 79908 ಸಕ್ರಿಯ ಪ್ರಕರಣಗಳಿವೆ. ರಾಜ್ಯವು ಪ್ರಸ್ತುತ 1.14 ಲಕ್ಷ ಕೋವಿಡ್ ಕೇರ್ ಕೇಂದ್ರಗಳ ಬೆಡ್‌ಗಳು, 20,000 ಸಾಮಾನ್ಯ ಬೆಡ್‌ಗಳು , 8000 ಆಕ್ಸಿಜನ್ ವ್ಯವಸ್ಥೆಯುಳ್ಳ ಬೆಡ್‌ಗಳು ಹಾಗೂ 3000 ಐ.ಸಿ.ಯು ಬೆಡ್ ಮತ್ತು 1500 ವೆಂಟಿಲೇಟರ್ ಉಳ್ಳ ಐ.ಸಿ.ಯು ಬೆಡ್‌ಗಳನ್ನು ಹೊಂದಿದ್ದು ಪರಿಸ್ಥಿತಿಯನ್ನು ನಿಭಾಯಿಸಲು ಸನ್ನದ್ಧವಾಗಿದೆ.

ಕೇಂದ್ರದಿಂದ 2025 ವೆಂಟಿಲೇಟರ್‌ಗಳನ್ನು ಒದಗಿಸಲಾಗಿದೆ. ಸಮಗ್ರ ಡಾಟಾ ನಿರ್ವಹಣೆಗೆ ಬಿ.ಬಿ.ಎಂ.ಪಿ ಆರೋಗ್ಯ ಕೇಂದ್ರಗಳು ಹಾಗೂ ರಾಷ್ಟ್ರೀಯ ಕಾರ್ಯಕ್ರಮಗಳು ಸಂಯೋಜಿತವಾಗಿದೆ.

**ರಾಜ್ಯದ ಬೇಡಿಕೆಗಳು**

ಕೋವಿಡ್ ಸಂಬಂಧಿತ ಚಟುವಟಿಕೆಗಳಿಗೆ ಅಂತಿಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ಅಂತಿಮ ವರ್ಷದ ಪೂರ್ವದಲ್ಲಿರುವ ಪ್ಯಾರಾ ಮೆಡಿಕಲ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳನ್ನು ಬಳಸಿಕೊಳ್ಳಲು ಪಾಠಗಳನ್ನು ಪ್ರಾರಂಭಿಸಲು ಅನುಮತಿ ಕೋರಲಾಯಿತು.

ವೈದ್ಯಕೀಯ ಕಾಲೇಜುಗಳಲ್ಲಿ ಪ್ರತಿ ವರ್ಷ 10,000 ಪದವಿ ಮತ್ತು 2,000 ಸ್ನಾತಕೋತ್ತರ ಸೀಟುಗಳನ್ನು ಹೆಚ್ಚಿಸಲು ಮನವಿ ಮಾಡಲಾಯಿತು.

ವೈದ್ಯಕೀಯ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಕೋರ್ಸು ಮುಗಿದ ನಂತರ ಕಡ್ಡಾಯವಾಗಿ ಸರ್ಕಾರಿ ಸೇವೆ ಸಲ್ಲಿಸಲು ಮಾರ್ಗಸೂಚಿಗಳನ್ನು ಹೊರಡಿಸಲು ಮನವಿ ಮಾಡಲಾಯಿತು.

ಲಿಕ್ವಿಡ್ ಆಕ್ಸಿಜನ್ ಘಟಕಗಳನ್ನು ಲಭ್ಯತೆ ಹಾಗೂ ವೈದ್ಯಕೀಯ ಸಂಸ್ಥೆಗಳಲ್ಲಿ ಆರೋಗ್ಯ ಕುರಿತ ಸಂಶೋಧನೆಯನ್ನು ಕಡ್ಡಾಯಗೊಳಿಸುವ ಬಗ್ಗೆ ಮನವಿ ಮಾಡಲಾಯಿತು.
ಸಭೆಯಲ್ಲಿ ಕರ್ನಾಟಕ ಸೇರಿದಂತೆ ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳನಾಡು, ಬಿಹಾರ್, ಗುಜರಾತ್, ಪಂಜಾಬ್, ಪಶ್ಚಿಮ ಬಂಗಾಲ, ಉತ್ತರ ಪ್ರದೇಶ, ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು.

**ಎಸ್ ಎಸ್ ಎಲ್ ಸಿ ಪರೀಕ್ಷೆಯ ಯಶಸ್ಸಿಗೆ ಶ್ರಮಿಸಿದ ಎಲ್ಲರಿಗೆ ಮುಖ್ಯಮಂತ್ರಿ ಕೃತಜ್ಞತೆ**

ಬೆಂಗಳೂರು, ಆಗಸ್ಟ್ 11 ( ಕರ್ನಾಟಕ ವಾರ್ತೆ ) :

ಸವಾಲುಗಳ ನಡುವೆ ಯಶಸ್ವಿಯಾಗಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ನಡೆಯಲು ಕಾರಣರಾದ ಎಲ್ಲರಿಗೂ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

ಕೊರೋನಾ ಸವಾಲುಗಳ ನಡುವೆ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಅಡ್ಡಿಯಾಗಬಾರದು ಎಂದು ರಾಜ್ಯ ಸರ್ಕಾರ ಟೊಂಕಕಟ್ಟಿ ನಿಂತು, ಈ ವರ್ಷದ ಜೂನ್ 25 ರಿಂದ ಜುಲೈ 3 ರವರೆಗೆ, ಅತ್ಯಂತ ಯಶಸ್ವಿಯಾಗಿ ನಡೆಸಿದ ಎಸ್.ಎಸ್.ಎಲ್.ಸಿ ಪರೀಕ್ಷೆಗಳ ಫಲಿತಾಂಶ ನಿನ್ನೆ ಪ್ರಕಟವಾಗಿದೆ. ಶೇಕಡಾ 71.80 ರಷ್ಟು ಮಕ್ಕಳು ತೇರ್ಗಡೆಯಾಗಿದ್ದಾರೆ.

ಆತಂಕಗಳನ್ನು ಮೀರಿ ಪರೀಕ್ಷೆ ಬರೆದ ಎಲ್ಲ ವಿದ್ಯಾರ್ಥಿ- ವಿದ್ಯಾರ್ಥಿನಿಯರಿಗೆ ನನ್ನ ಶುಭ ಕಾಮನೆಗಳು. ತಮ್ಮ ಮುಂದಿನ ವಿದ್ಯಾಭ್ಯಾಸವು ಸುಗಮವಾಗಿ ನಡೆಯಲಿ. ತಮಗೆ ಉಜ್ವಲ ಭವಿಷ್ಯ ಲಭಿಸಲಿ. ಫಲಿತಾಂಶದಲ್ಲಿ ಹಿನ್ನಡೆ ಕಂಡ ಮಕ್ಕಳು ಧೈರ್ಯ ದೃತಿಗೆಡದೆ ಮತ್ತಷ್ಟು ಪರಿಶ್ರಮ, ಆತ್ಮವಿಶ್ವಾಸದಿಂದ ಸಿದ್ದತೆ ನಡೆಸಿ, ಪೂರಕ ಪರೀಕ್ಷೆಗಳನ್ನು ಎದುರಿಸಿ ಉತ್ತೀರ್ಣರಾಗಲಿ.

ಪರೀಕ್ಷೆಗೆ ಹಾಜರಾದ ಎಲ್ಲಾ ಮಕ್ಕಳ ಪೋಷಕರಿಗೆ, ಪರೀಕ್ಷೆಯನ್ನು ಯಶಸ್ವಿಯಾಗಿ  ನಡೆಸಲು ಸಹಕರಿಸಿದ ಶಿಕ್ಷಕ ವೃಂದಕ್ಕೆ ನಾನು ಅಭಾರಿ. ಹಿಂದೆಂದೂ ಕಾಣದ, ಕೇಳರಿಯದಂತಹ ಕೊರೋನಾ ಸವಾಲಿನ ಪರಿಸ್ಥಿತಿಗಳಲ್ಲಿ ಪರೀಕ್ಷೆ ಬರೆಯಲು ಮಕ್ಕಳನ್ನು ಸಿದ್ದಗೊಳಿಸಿದ ತಮ್ಮೆಲ್ಲರ  ಕೊಡುಗೆಗೆ ಹಾಗೂ ರಾಜ್ಯ ಸರ್ಕಾರದ ಮೇಲಿನ ತಮ್ಮ ವಿಶ್ವಾಸಕ್ಕೆ ನಾನು ಋಣಿ.

ಪ್ರಮುಖವಾಗಿ, ಸುರಕ್ಷಿತವಾಗಿ ಮತ್ತು ಯಶಸ್ವಿಯಾಗಿ ಪರೀಕ್ಷೆಗಳು ನಡೆಯಲು ಕಾರಣಕರ್ತರಾದ ಪ್ರಾಥಮಿಕ ಶಿಕ್ಷಣ ಸಚಿವ ಶ್ರೀ ಎಸ್. ಸುರೇಶ್ ಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಬಿ. ಶ್ರೀರಾಮುಲು, ವೈದ್ಯಕೀಯ ಶಿಕ್ಷಣ ಸಚಿವ ಡಾ ಕೆ ಸುಧಾಕರ್, ವಿಶೇಷವಾಗಿ ಸಾರಿಗೆ ಖಾತೆ ಹೊತ್ತ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರೂ ಒಳಗೊಂಡಂತೆ ಎಲ್ಲಾ ಸಚಿವರಿಗೆ, ಅಧಿಕಾರಿ ಮತ್ತು ಸಿಬ್ಬಂದಿಗೆ ನನ್ನ ಅಭಿನಂದನೆಗಳು.

ರಾಜ್ಯ ಸರ್ಕಾರ ಈ ನಿಟ್ಟಿನಲ್ಲಿ ಅವಿರತ ಪ್ರಯತ್ನ ನಡೆಸಿ, ಇಡೀ ದೇಶ ಕರ್ನಾಟಕದತ್ತ ನೋಡುವಂತೆ ಮಾಡಿದೆ. ಕೊರೋನಾ ಸಾಂಕ್ರಾಮಿಕ ಇಡೀ ಜಗತ್ತನ್ನೇ ಬಾಧಿಸುತ್ತಿದ್ದು, ವಿಶ್ವದ ಬಹುತೇಕ ದೇಶಗಳು ಇದರಿಂದ ಬಾಧೆಗೆ ಒಳಗಾಗಿವೆ. ಭಾರತವೂ ಕೂಡ ಕಳೆದ ಕೆಲವು ತಿಂಗಳುಗಳಿಂದ ಕೊರೋನಾ ವಿರುದ್ಧ ಸಮರವನ್ನು ಸಾರಿದ್ದು, ದೇಶದ ನಾಗರಿಕರ ಸಹಕಾರಗಳಿಂದ, ವೈರಾಣು ನಿಯಂತ್ರಿಸಲು ನಿರ್ಣಾಯಕ ಹೋರಾಟ ನಡೆಸುತ್ತಿದೆ.

ರಾಜ್ಯ ಸರ್ಕಾರವೂ ಕೂಡ ಎಲ್ಲಾ ರೀತಿಯಲ್ಲಿ ಸಾಂಕ್ರಾಮಿಕ ನಿಯಂತ್ರಣಕ್ಕೆ ಪ್ರಯತ್ನ ನಡೆಸುತ್ತಲೇ ಇದೆ. ಇದಕ್ಕೆ ಸಾರ್ವಜನಿಕರ ಸಹಕಾರ.ಕೋರುತ್ತಾ, ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಜನ ಮೆಚ್ಚುವಂತೆ ಯಶಸ್ವಿಯಾಗಿ ನಡೆಸಿದ ಇಡೀ ಆಡಳಿತ ಯಂತ್ರಕ್ಕೆ ಮತ್ತೊಮ್ಮೆ ನನ್ನ ಅಭಿನಂದನೆಗಳು ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

**ಕೋವಿಡ್ ದೃಢಪಟ್ಟು ಚಿಕಿತ್ಸೆ ಪಡೆಯುತ್ತಿರುವ ಅಧಿಕಾರಿ ಸಿಬ್ಬಂದಿಯೊಂದಿಗೆ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಡಾ ಪಿ ಎಸ್ ಹರ್ಷ ಮಾತುಕತೆ**

ಬೆಂಗಳೂರು, ಆಗಸ್ಟ್ 11 ( ಕರ್ನಾಟಕ ವಾರ್ತೆ ) :

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿ ವಾರ್ತಾ ಸೌಧದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರು ಹಾಗೂ ಹೊರಗುತ್ತಿಗೆ ಸಿಬ್ಬಂದಿ ಒಳಗೊಂಡಂತೆ 21 ಮಂದಿಗೆ ಕೋವಿಡ್-19 ಸೋಂಕು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಇಲಾಖಾ ಆಯುಕ್ತ ಡಾ ಪಿ ಎಸ್ ಹರ್ಷ ಅವರು ನಗರದ ವಿವಿಧೆಡೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಯೊಂದಿಗೆ ಜೂಮ್ ಸಮ್ಮೇಳನದ ಮೂಲಕ ಮಾತುಕತೆ ನಡೆಸಿ ಆರೋಗ್ಯ ವಿಚಾರಿಸಿದರು.

ಸ್ವತಃ ವೈದ್ಯರೂ ಆಗಿರುವ ಡಾ ಹರ್ಷ ಅವರು ಈ ಸೋಂಕು ಕುರಿತು ಭಯಪಡುವ ಅಗತ್ಯವಿಲ್ಲ. ಅಂತೆಯೇ, ಈ ಸೋಂಕನ್ನು ಯಾರೂ ನಿರ್ಲಕ್ಷಿಸುವಂತೆಯೂ ಇಲ್ಲ. ಸಕಾಲಿಕ ಚಿಕಿತ್ಸೆ ಅತ್ಯಾವಶ್ಯಕ. ವೈದ್ಯರು ನೀಡುತ್ತಿರುವ ಔಷಧಿ ಹಾಗೂ ಮಾತ್ರೆಗಳನ್ನು ಕಾಲಕಾಲಕ್ಕೆ ತೆಗೆದುಕೊಳ್ಳಿ. ಶೀಘ್ರವೇ ಗುಣಮುಖರಾಗುವಿರಿ. ಸಂಕಷ್ಟದ ಕಾಲದಲ್ಲಿ ನೀವು ಒಬ್ಬಂಟಿಯಲ್ಲ ! ಇಲಾಖೆ ತಮ್ಮ ಜೊತೆಗಿದೆ ಎಂದು ಧೈರ್ಯ ತುಂಬಿದರು.

## ಕನ್ನಡದಲ್ಲಿ ಕೌಶಲ್ಯಾಧಾರಿತ ಕಾಲೇಜು ಶಿಕ್ಷಣ ನೀಡುವಂತಾಗಬೇಕು: ಟಿ.ಎಸ್.ನಾಗಾಭರಣ

**ಬೆಂಗಳೂರು, ಆಗಸ್ಟ್ 11( ಕರ್ನಾಟಕ ವಾರ್ತೆ ) :**

ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಶಿಕ್ಷಣ ನೀತಿ 2020 ಅನುಮೋದನೆಗೊಂಡ ಹಿನ್ನೆಲೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರ ಅಧ್ಯಕ್ಷತೆಯಲ್ಲಿ ಶಿಕ್ಷಣ ನೀತಿಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾಧಕ ಬಾಧಕಗಳ ಕುರಿತು ಶಿಕ್ಷಣ ತಜ್ಞರು ಹಾಗೂ ಭಾಷಾ ತಜ್ಞರುಗಳೊಂದಿಗೆ ನಡೆಸಿದ ಜಾಲ ಸಂಪರ್ಕ ಸಭೆಯಲ್ಲಿ ಕೆಲವು ಮಹತ್ವದ ವಿಷಯಗಳನ್ನು ಚರ್ಚಿಸಲಾಯಿತು.

ಪ್ರಸ್ತುತ ಅನುಮೋದನೆಗೊಂಡಿರುವ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ 1 ರಿಂದ 5ನೇ ತರಗತಿವರೆಗೆ ಆಯಾ ಸ್ಥಳೀಯ ಭಾಷೆಗಳಲ್ಲಿ ಬೋಧನೆಗೆ ಒತ್ತು ನೀಡಿರುವುದು ಸ್ತುತ್ಯಾರ್ಹವಾದುದು. ಇಂತಹ ನೀತಿ ಬಂದಾಗ ಭಾವಾತಿರೇಕದಿಂದ ಒಪ್ಪಿಕೊಳ್ಳದೆ ಸಾಧಕಬಾಧಕಗಳ ಬಗ್ಗೆಯೂ ಕೂಲಂಕಷವಾಗಿ ಅರಿಯಬೇಕಿದೆ ಎಂದು ಸಭೆಯ ಅಧ್ಯಕ್ಷತೆ ವಹಿಸಿದ್ದ **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ** ಅವರು ಹೇಳಿದರು.

ರಾಷ್ಟ್ರೀಯ ಶಿಕ್ಷಣ ನೀತಿಗೆ ಸಂಬಂಧಿಸಿದಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ನಿರಂತರವಾಗಿ ಶ್ರಮಿಸುತ್ತಲೇ ಬಂದಿದೆ. ಸತತ ಮೂರು ದಶಕಗಳ ಹೋರಾಟದ ಫಲವಾಗಿ ಇಂದು ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಅನುಮೋದನೆಗೊಂಡಿದೆ ಎಂದರು.

**ಶಿಕ್ಷಣ ತಜ್ಞರಾದ ನಿರಂಜನಾರಾಧ್ಯ ಅವರು ಮಾತನಾಡಿ,** ಮಕ್ಕಳು 1 ರಿಂದ 5ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ಓದಿ ನಂತರ ಆಂಗ್ಲ ಮಾಧ್ಯಮದಲ್ಲಿ ಮುಂದುವರಿದರೆ ಭಾಷೆಯ ಪ್ರಬುದ್ಧತೆ ಮತ್ತು ವೈಶಿಷ್ಟ್ಯತೆಯನ್ನು ಹೇಗೆ ತಂದು ಕೊಡಲು ಸಾಧ್ಯವಿದೆ. ಹಾಗಾಗಿ ವಿಶ್ವವಿದ್ಯಾಲಯಗಳ ಹಂತದಲ್ಲೂ ಕನ್ನಡವನ್ನು ಕಲಿಯುವಂತಾಗಬೇಕು ಎಂದು ಅಭಿಪ್ರಾಯಪಟ್ಟರು.

**ಪ್ರೊ.ಹಿ.ಚಿ.ಬೋರಲಿಂಗಯ್ಯ, ವಿಶ್ರಾಂತ ಕುಲಪತಿಗಳು, ಕನ್ನಡ ವಿಶ್ವವಿದ್ಯಾಲಯ, ಹಂಪಿ** ಇವರು ಮಾತನಾಡಿ, ಮಕ್ಕಳು ಮಾತೃಭಾಷೆಯಲ್ಲಿ ಶಿಕ್ಷಣ ಪಡೆದರೆ ಹೆಚ್ಚು ಅರ್ಥಪೂರ್ಣವಾಗುವುದರ ಜೊತೆಗೆ ವೈಚಾರಿಕತೆಯಿಂದ ಕೂಡಿರುತ್ತದೆ. ಇದು ಅವರ ಬದುಕನ್ನು ಸವಾಲಾಗಿ ಎದುರಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ. ಹಾಗಾಗಿ ಶಿಕ್ಷಣ ನೀತಿಗೆ ಸಂಬಂಧಿಸಿದಂತೆ ಸ್ವಾತಂತ್ರ್ಯ ನಂತರ ಕ್ರಾಂತಿಕಾರಕ ಹೆಜ್ಜೆಗಳನ್ನು ಇಡಲಿಲ್ಲ. ಪ್ರಸ್ತುತ ಸಂದರ್ಭದಲ್ಲಾದರೂ ಕೌಶಲ್ಯಾಧಾರಿತ ಶಿಕ್ಷಣ ನೀಡುವ ನಿಟ್ಟಿನಲ್ಲಿ ಮುಂದುವರಿಯಬೇಕಿದೆ ಎಂದು ಅಭಿಪ್ರಾಯಪಟ್ಟರು.

**ಡಾ.ತೇಜಸ್ವಿ ಕಟ್ಟೀಮನಿ, ಇಂದಿರಾಗಾಂಧಿ ರಾಷ್ಟ್ರೀಯ ಬುಡಕಟ್ಟು ವಿಶ್ವವಿದ್ಯಾಲಯ, ಮಧ್ಯಪ್ರದೇಶ, ಇವರು**

**ಮಾತನಾಡಿ**, ಪ್ರಸ್ತುತ ಸಂದರ್ಭದಲ್ಲಿ ದೇಶದ ಜ್ಞಾನ ಪರಂಪರೆಯನ್ನು ಹೇಗೆ ಅಳವಡಿಕೊಳ್ಳಬೇಕು ಮತ್ತು ವಿಸ್ತರಿಸಿಕೊಳ್ಳ ಬೇಕು ಎಂಬ ಬಗ್ಗೆ ಎಲ್ಲರೂ ಒಗ್ಗೂಡಿ ಚರ್ಚಿಸಬೇಕಿದೆ, ಭಾರತದ ವಿಶೇಷತೆಗಳ ಬಗ್ಗೆ ಸಂಶೋಧನೆಗಳು ಹೆಚ್ಚಾಗಿ ನಡೆಯಬೇಕಿದೆ. ಈ ಮೂಲಕ ಭಾಷೆಯನ್ನು ಎಷ್ಟು ಶಸಕ್ತವಾಗಿ ಬೆಳೆಸುತ್ತೇವೆ ಎಂಬುದು ಬಹಳ ಮುಖ್ಯ. ಈ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮುಂದಡಿ ಇಡಿಬೇಕಿದೆ ಎಂದು ಹೇಳಿದರು.

**ಕಲಬುರಗಿಯ ಹಿರಿಯ ವೈದ್ಯರಾದ ಪಿ.ಎಸ್.ಶಂಕರ್** ಅವರು ವೃತ್ತಿ ಶಿಕ್ಷಣ ಕುರಿತು ಸಾಧಕ ಬಾಧಕಗಳನ್ನು ಸಭೆಗೆ ತಿಳಿಸಿದರು.

**ರಾಷ್ಟ್ರೀಯ ಶಿಕ್ಷಣ ನೀತಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಕೈಗೊಂಡ ಪ್ರಮುಖ ನಿರ್ಣಯಗಳು:**

ಪ್ರಾಥಮಿಕ ಶಿಕ್ಷಣ ಹಂತದಲ್ಲಿರಾಜ್ಯ ಸರ್ಕಾರ 1 ರಿಂದ 5ನೇ ತರಗತಿವರೆಗೆ ಕರ್ನಾಟಕ ರಾಜ್ಯದ ಎಲ್ಲಾ ಪಠ್ಯ ಕ್ರಮಗಳ ಶಾಲೆಗಳಲ್ಲಿ ರಾಜ್ಯ ಭಾಷೆ ಕನ್ನಡ ಮಾಧ್ಯಮದಲ್ಲಿ ಆಗುವ ನಿಟ್ಟನಲ್ಲಿ ಕ್ರಮಕೈಗೊಳ್ಳಬೇಕು. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಪ್ರಾಥಮಿಕ ಹಂತದ ಶಿಕ್ಷಣ ರಾಜ್ಯ ಭಾಷೆ/ಪ್ರಾದೇಶಿಕ ಭಾಷೆಯಲ್ಲಿ ಕಡ್ಡಾಯ ಮಾಡದೇ ಇರುವುದರಿಂದ ಈ ರೀತಿಯ ಗೊಂದಲ ಉಂಟಾಗಿದೆ.
ಹಾಗಾಗಿ ರಾಜ್ಯ ಸರ್ಕಾರ ಹೊಸ ಶಿಕ್ಷಣ ನೀತಿಗೆ ಪೂರಕವಾಗಿ ರಾಜ್ಯ ಭಾಷೆ / ಪ್ರಾದೇಶಿಕ ಭಾಷೆಯನ್ನು ಕಡ್ಡಾಯ ಮಾಡುವುದರ ಮೂಲಕ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ನೀಡಲು ಮುಂದಾಗಬೇಕು. ಅದೇ ರೀತಿ ಉನ್ನತ ಶಿಕ್ಷಣದ ಹಂತದಲ್ಲಿ ಯಾವ ಮಾಧ್ಯಮದಲ್ಲಿ ಶಿಕ್ಷಣ ಇರಬೇಕೆಂದು ಸ್ಪಷ್ಟಪಡಿಸಿಲ್ಲ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕನ್ನಡ ಮಾಧ್ಯಮದಲ್ಲಿ ಉನ್ನತ ಶಿಕ್ಷಣ ನೀಡುವುದಕ್ಕೆ ಪೂರಕವಾದ ನಿಯಮಗಳನ್ನು ರೂಪಿಸಬೇಕಿದೆ. ಅಲ್ಲದೇ ಒಂದು ಭಾಷೆಯಾಗಿ ಕೂಡ ಕಡ್ಡಾಯವಾಗಿ ಎಲ್ಲಾ ಸೆಮಿಸ್ಟರ್‌ಗಳಲ್ಲಿ ಕಲಿಸುವ ಅಗತ್ಯವಿದೆ. ಹಾಗೆವೃತ್ತಿ ಶಿಕ್ಷಣ ಕ್ಕೆ ಸಂಬಂಧಿಸಿದಂತೆ ವೃತ್ತಿ ಶಿಕ್ಷಣದ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯ ಆಧಾರಿತ ಶಿಕ್ಷಣ ನೀಡುವುದರಿಂದ ಆ ಕೌಶಲ್ಯವನ್ನು ಕನ್ನಡ ಮಾಧ್ಯಮದಲ್ಲಿ ನೀಡುವ ನಿಟ್ಟಿನಲ್ಲಿ ಹೆಚ್ಚು ಒತ್ತು ನೀಡಬೇಕು ಎಂದು ತಜ್ಞರು ಅಭಿಪ್ರಾಯ ಪಡಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ,ಕೆ.ಮುರಳಿಧರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವಿರಶೆಟ್ಟಿ, ತಜ್ಞ ರಾದ ಶ್ರಿ ಚಂದ್ರಶೇಖರ ದಾಮ್ಲೆ, ಶ್ರೀ ಎ.ಎಂ.ನರಹರಿ ಮತ್ತಿತರರು ಉಪಸ್ಥಿತರಿದ್ದರು

# ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ತಂತ್ರಾಂಶ ಅಭಿವೃದ್ಧಿ ದೇಶಕ್ಕೆ ಮಾದರಿಯಾಗಲಿದೆ: ಟಿ.ಎಸ್.ನಾಗಾಭರಣ

**ಆಗಸ್ಟ್ 11, ಬೆಂಗಳೂರು ( ಕರ್ನಾಟಕ ವಾರ್ತೆ ) :**

ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ತಂತ್ರಾಂಶ ಅಭಿವೃದ್ಧಿಯಿಂದ ಐಟಿ.ಬಿಟಿ. ಸೇರಿದಂತೆ ಖಾಸಗಿ ವಲಯದಲ್ಲಿ ಉದ್ಯೋಗ ಪಡೆಯುವಲ್ಲಿ ವಂಚಿತರಾಗುತ್ತಿರುವ ಬಹುತೇಕ ಕನ್ನಡಿಗರಿಗೆ ವರದಾನವಾಗಲಿದ್ದು, ರಾಜ್ಯೋತ್ಸವದ ವೇಳೆಗೆ ಇದಕ್ಕೆ ಅಧಿಕೃತ ಚಾಲನೆ ನೀಡಲಾಗುವುದು ಎಂದು **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ** ಅವರು ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಯೋಜನೆ ಕುರಿತು ತಜ್ಞರೊಂದಿಗೆ ಜಾಲ ಸಂಪರ್ಕ (ಆನ್‌ಲೈನ್) ಸಭೆ ನಡೆಸಿದ ಅವರು, ಈ ಪರೀಕ್ಷಾ ತಂತ್ರಾಂಶವನ್ನು ಅಭಿವೃದ್ಧಿಯಿಂದ ಅನಿವಾಸಿ ಕನ್ನಡಿಗರಿಗೂ ಹೆಚ್ಚಿನ ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಉನ್ನತ ಮಟ್ಟದ ಅಧಿಕಾರಿಗಳಿಂದ ಕೆಳಹಂತದ ನೌಕರರು ಸೇರಿದಂತೆ ಕರ್ನಾಟಕದಲ್ಲಿ ನೆಲೆಸಿರುವ ಪ್ರತಿಯೊಬ್ಬರೂ ಕನ್ನಡ ಭಾಷೆಯನ್ನು ಕಲಿಯಬೇಕು ಎನ್ನುವುದು ಪ್ರಾಧಿಕಾರದ ಆಶಯವಾಗಿದೆ. ಈ ಉದ್ದೇಶದಿಂದಲೆ ಈ ಕೆಲಸವನ್ನು ಪ್ರಾಧಿಕಾರ ಕೈಗೆತ್ತಿಕೊಂಡಿದ್ದು, ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ತಂತ್ರಾಂಶ ಅಭಿವೃದ್ಧಿ ದೇಶಕ್ಕೆ ಮಾದರಿಯಾಗಲಿದೆ ಎಂದು ಹೇಳಿದರು.

ಆನ್‌ಲೈನ್ ಪರೀಕ್ಷೆ ಪಾಸು ಮಾಡುವವರಿಗೆ ಪ್ರಮಾಣ ಪತ್ರವನ್ನು ನೀಡಲಾಗುವುದು. ಇದು ಉದ್ಯೋಗ ಪಡೆಯುವ ಸಂದರ್ಭದಲ್ಲಿ ಸಹಕಾರಿಯಾಗಲಿದೆ. ಹಾಗಾಗಿಯೇ ಪರೀಕ್ಷೆ ದೃಷ್ಟಿಯಿಂದ ಪಠ್ಯಕ್ರಮ, ಪಠ್ಯಬೋಧನೆ ಇತ್ಯಾದಿ ಎಲ್ಲದರ ಸಾಧಕ-ಬಾಧಕಗಳ ಬಗ್ಗೆ ತಜ್ಞರೊಂದಿಗೆ ಚರ್ಚಿಸಿ ನಂತರ ಮುಖ್ಯಮಂತ್ರಿಗಳಿಗೂ ಈ ಬಗ್ಗೆ ಮನವರಿಕೆ ಮಾಡಿಕೊಡಲಾಗುವುದು ಎಂದರು.

ಗಡಿನಾಡು, ಹೊರನಾಡು, ಹೊರದೇಶದ ಕನ್ನಡಿಗರಿಗೆ ಕನ್ನಡ ಕಲಿಕೆಯ ದೃಢೀಕರಣ ಬಯಸುವವರಿಗೆ ಕನ್ನಡ ಭಾಷಾ ಕೌಶಲ್ಯ ಆನ್‌ಲೈನ್ ಪರೀಕ್ಷೆ ಯೋಜನೆ ಅತ್ಯುತ್ತಮವಾದ ಸಾಧನವಾಲಿದೆ. ಇಂತಹ ಮಹತ್ವದ ಕಾರ್ಯಕ್ಕೆ ಎಲ್ಲರೂ ಬದ್ಧತೆಯಿಂದ ಕೆಲಸ ಮಾಡುವಂತೆ ಸಭೆಯಲ್ಲಿ ಪಾಲ್ಗೊಂಡಿದ್ದ ಅಧಿಕಾರಿಗಳಿಗೆ ಸಲಹೆ ನೀಡಿದರು.

**ಮಾನ್ಯ ಮುಖ್ಯಮಂತ್ರಿಗಳ ಇ-ಆಡಳಿತ ಸಲಹೆಗಾರರಾದ ಬೇಳೂರು ಸುದರ್ಶನ** ಅವರು ಪರೀಕ್ಷಾ ಯೋಜನೆಯ ಸಾಧಕ-ಬಾಧಕಗಳ ಬಗ್ಗೆ ಸಭೆಯ ಗಮನ ಸೆಳೆದರು.

**ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ** ಅವರು ಕನ್ನಡ ಭಾಷಾ ಕೌಶಲ್ಯ ಆನ್ ಲೈನ್ ಯೋಜನೆ ಕುರಿತ ರೂಪು-ರೇಷೆಗಳ ಬಗ್ಗೆ ಮಾತನಾಡಿ, ಎಲ್ಲರನ್ನು ವಂದಿಸಿದರು.

**ಡಾ.ಸುನೀಲ್ ಪನ್ವಾರ್, ಐಎಫ್‌ಎಸ್., ಕಾರ್ಯಕಾರಿ ನಿರ್ದೇಶಕರು, ಸಿ.ಎಸ್.ಜಿ., ಬೆಂಗಳೂರು. ಕೆ.ಎಸ್.ಶಿವರಾಮ್, ಯೋಜನಾ ನಿರ್ದೇಶಕರು, ಇ-ಕನ್ನಡ, ಇ-ಆಡಳಿತ,** ಬೆಂಗಳೂರು, ಮತ್ತಿತರರು ಉಪಸ್ಥಿತರಿದ್ದರು.

**ಕ್ರೈಸ್ ವಸತಿ ಶಾಲೆಯ ವಿದ್ಯಾರ್ಥಿ ಆನಂದ ಹೊಸಮನಿ**
**– ಶ್ರೀ ಗೋವಿಂದ ಕಾರಜೋಳ ಅವರಿಂದ ಅಭಿನಂದನೆ**

**ಬೆಂಗಳೂರು, ಆಗಸ್ಟ್ 11 ( ಕರ್ನಾಟಕ ವಾರ್ತೆ ) :**

ಕೊರೊನಾ ಸೊಂಕಿನ ನಡುವೆಯೂ ರಾಜ್ಯದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶವು ಅತ್ಯುತ್ತಮವಾಗಿ ಬಂದಿದ್ದು, ಬಾಗಲಕೋಟೆ ಜಿಲ್ಲೆಯ ಬೀಳಗಿಯ ಮುರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿ ಆನಂದ ಮಲ್ಲಿಕಾರ್ಜುನ ಹೊಸಮನಿ 623 (ಶೇ.99.68) ಅಂಕಗಳಿಸಿ ರಾಜ್ಯಕ್ಕೆ 3 ನೇ ರ‍್ಯಾಂಕ್, ಬಾಗಲಕೋಟೆ ಜಿಲ್ಲೆಗೆ ಪ್ರಥಮ ರ‍್ಯಾಂಕ್ ಪಡೆದಿದ್ದಾರೆ. 94.07 ಶೇ. ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಅವರನ್ನು ಉಪಮುಖ್ಯಮಂತ್ರಿಗಳಾದ ಶ್ರೀ ಗೋವಿಂದ ಎಂ ಕಾರಜೋಳ ಅವರು ಅಭಿನಂದಿಸಿದ್ದಾರೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ 482 ವಸತಿ ಶಾಲೆಗಳ 20,111 ವಿದ್ಯಾರ್ಥಿಗಳು ಸುರಕ್ಷಿತವಾಗಿ ಪರೀಕ್ಷೆ ಬರೆದಿದ್ದು ಅವರಲ್ಲಿ 18919 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ರಾಜ್ಯದ ಒಟ್ಟಾರೆ ಫಲಿತಾಂಶಕ್ಕಿಂತ 22.27 ರಷ್ಟು ಹೆಚ್ಚು ಫಲಿತಾಂಶ ದಾಖಲಾಗಿದೆ. ಬಳ್ಳಾರಿ ಜಿಲ್ಲೆಯ ಮುರಾರ್ಜಿ ವಸತಿ ಶಾಲೆಯ ಎಂ. ಸುನಿಲ್ ನಾಯಕ್ 622 ಅಂಕಗಳಿಸಿ ರಾಜ್ಯದಲ್ಲಿ 4 ನೇ ಸ್ಥಾನ ಪಡೆದಿದ್ದಾರೆ. ನಾಲ್ಕು ವಿದ್ಯಾರ್ಥಿಗಳು 621 ಅಂಕಗಳಿಸಿದ್ದಾರೆ. ಜಗಳೂರು ತಾಲೂಕಿನ ಸೊಕ್ಕೆ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಯಶಸ್ವಿನಿ, ಬೈಲಹೊಂಗಲ ತಾಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಸ್ನೇಹ ಕಟಗಣ್ಣನವರ್, ಮೂಡ್ಲಗಿ ತಾಲೂಕಿನ ಕಲ್ಲೋಳ್ಳಿಯ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಸತ್ಯನಾರಾಯಣ ಕಂದ್ರಟ್ಟಿ, ತುಮಕೂರು ಜಿಲ್ಲೆಯ ಭುವನಹಳ್ಳಿಯ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಪುಷ್ಪಲತ ಅವರು ತಲಾ 621 ಅಂಕಗಳಿಸಿದ್ದಾರೆ. 37 ವಿದ್ಯಾರ್ಥಿಗಳು 615ಕ್ಕಿಂತ ಹೆಚ್ಚು ಅಂಕಗಳಿಸಿದ್ದಾರೆ. ರಾಜ್ಯದ ಒಟ್ಟು 34 ಶೈಕ್ಷಣಿಕ ಜಿಲ್ಲೆಗಳ ಪೈಕಿ 14 ಶೈಕ್ಷಣಿಕ ಜಿಲ್ಲೆಗಳಲ್ಲಿ ಪ್ರಥಮ ಸ್ಥಾನವನ್ನು ವಸತಿ ಶಾಲೆಗಳ ವಿದ್ಯಾರ್ಥಿಗಳು ಪಡೆದಿದ್ದಾರೆ. 9 ಶೈಕ್ಷಣಿಕ ಜಿಲ್ಲೆಗಳು ದ್ವಿತಿಯ ಸ್ಥಾನ ಹಾಗೂ 16 ಶೈಕ್ಷಣಿಕ ಜಿಲ್ಲೆಗಳಲ್ಲಿ ತೃತಿಯ ಸ್ಥಾನವನ್ನು ವಸತಿ ಶಾಲೆಗಳ ವಿದ್ಯಾರ್ಥಿಗಳು ತಮ್ಮದನ್ನಾಗಿಸಿಕೊಂಡಿದ್ದಾರೆ. ಒಟ್ಟಾರೆಯಾಗಿ 24 ಶೈಕ್ಷಣಿಕ ಜಿಲ್ಲೆಗಳಲ್ಲಿ ಟಾಪ್ 3ರಲ್ಲಿ ಒಂದು ರ‍್ಯಾಂಕ್‌ಗಳಿಸಿ, ಕ್ರೈಸ್ ವಸತಿ ಸಂಸ್ಥೆಯ ಹಿರಿಮೆಯನ್ನು ಹೆಚ್ಚಿಸಿದ್ದಾರೆ.

5308 (ಶೇ.28.08) ವಿದ್ಯಾರ್ಥಿಗಳು ಶೇ. 85ಕ್ಕಿಂತ ಹೆಚ್ಚು ಅಂಕಗಳಿಸಿ, ಡಿಸ್ಟಿಂಗ್ಷನ್ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. 12685 (ಶೇ. 67.04) ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು, ಒಟ್ಟಾರೆ 17,993 (ಶೇ. 95.1)ವಿದ್ಯಾರ್ಥಿಗಳು ಡಿಸ್ಟಿಂಗ್ಷನ್ ಮತ್ತು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. 158 ವಸತಿ ಶಾಲೆಗಳು ಶೇ. 100 ರಷ್ಟು ಫಲಿತಾಂಶ ದಾಖಲಿಸಿವೆ. ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಡಿಸಿಎಂ ಶುಭ ಹಾರೈಸಿದ್ದಾರೆಎಂದು ಅಧಿಕೃತ ಪ್ರಕಟಣೆ ತಿಳಿಸಿದೆ

**ನೀರಿನ ಅದಾಲತ್**

ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ): ಬೆಂಗಳೂರು ಜಲಮಂಡಳಿಯು ದಿನಾಂಕ: 13.08.2020 ಗುರುವಾರ ದಂದು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ **ಸಕಾನಿಅ(ಪೂರ್ವ)-2-3,(ಪೂರ್ವ)-1-2, (ದಕ್ಷಿಣ-2),(ಆಗ್ನೇಯ-4),(ಪಶ್ಚಿಮ-2),(ನೈರುತ್ಯ-2),(ಆಗ್ನೇಯ-2),(ವಾಯುವ್ಯ-3),(ಕೇಂದ್ರ-2)(ಉತ್ತರ-2),(ಈಶಾನ್ಯ-1) ಮತ್ತು (ಉತ್ತರ ವಿಲೇಜ್ -1)** ಉಪವಿಭಾಗಗಳಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತ್ತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ

ಕುಂದುಕೊರತೆಗಳಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಗಂಟೆಯವರೆಗೆ ನಡೆಸುತ್ತಿದ್ದು, ಅದಾಲತ್ ನಡೆಯುವ ಸ್ಥಳಗಳ ವಿವರ ಈ ಕೆಳಗಿನಂತಿದೆ.

| ಉಪವಿಭಾಗದ ಹೆಸರು | ವಿಳಾಸ | ದೂರವಾಣಿ ಸಂಖ್ಯೆ |
|---|---|---|
| (ಪೂರ್ವ)-2-3 | 1ನೇ ಮುಖ್ಯ ರಸ್ತೆ, ಕಸ್ತೂರಿನಗರ,ಬೆಂಗಳೂರು-43. | 9845444058 |
| (ಪೂರ್ವ)-1-2 | ಎ. ನಾರಾಯಣಪುರ ಮುಖ್ಯ ರಸ್ತೆ, ಕೆ.ಆರ್.ಪುರಂ ರೈಲ್ವೇ ನಿಲ್ದಾಣದ ಎದುರು, ಪಟಾಲಮ್ಮ ದೇವಸ್ಥಾನದ ಹತ್ತಿರ, ಹನುಮಾನ್ ಜಂಕ್ಷನ್, ಎ.ನಾರಾಯಣಪುರ.ಬೆಂಗಳೂರು-16 | 28510008 |
| (ದಕ್ಷಿಣ-2) | ವಾಟರ್ ಟ್ಯಾಂಕ್ ಹತ್ತಿರ, 100 ಅಡಿ ರಸ್ತೆ, ಬಿ.ಟಿ.ಎಂ 2ನೇ ಹಂತ, ಬೆಂಗಳೂರು-76 | 40977432 |
| ( ಆಗ್ನೇಯ-4) | 2ನೇ ಅಡ್ಡರಸ್ತೆ, 17ನೇ ಮುಖ್ಯರಸ್ತೆ, ಕೋರಮಂಗಲ 3ನೇ ಬ್ಲಾಕ್, ಬೆಂಗಳೂರು.-34 | 22945245 |
| (ಪಶ್ಚಿಮ-2) | 5ನೇ ಹಂತ, 1ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ರಾಜರಾಜೇಶ್ವರಿ ನಗರ, ಬೆಂಗಳೂರು-98 | 28611826 |
| (ನೈರುತ್ಯ-2) | ನೆಲಮಹಡಿ, 1ನೇ ಮುಖ್ಯ ರಸ್ತೆ, ಬನಶಂಕರಿ 3ನೇ ಹಂತ,ಬನಗಿರಿನಗರ, ಬೆಂಗಳೂರು. | 22945144 |
| (ಆಗ್ನೇಯ-2) | 10ನೇ ಮುಖ್ಯ ರಸ್ತೆ, 7ನೇ ಅಡ್ಡ ರಸ್ತೆ, ಇಂದಿರಾನಗರ ಕ್ಲಬ್ ಹಿಂಭಾಗ, ಹೆಚ್.ಎ.ಎಲ್ 2ನೇ ಹಂತ, ಬೆಂಗಳೂರು. | 22945163 |
| (ವಾಯುವ್ಯ-3) | 5ನೇ ಬ್ಲಾಕ್,ಹೊರವರ್ತುಲ ರಸ್ತೆ, ನಾಗರಬಾವಿ,ಬೆಂಗಳೂರು. | 23212181 |
| (ಕೇಂದ್ರ-2) | ಮಿಲ್ಲರ್ಸ್ ರಸ್ತೆ, ಹೈಗ್ರೌಂಡ್ಸ್, ಬೆಂಗಳೂರು-52 | 22945191 |
| (ಉತ್ತರ-2) | 1ನೇ ಮಹಡಿ, ಪಿನಾಕಿನಿ ಭವನ, ದೊಡ್ಡಬಳ್ಳಾಪುರ ಮುಖ್ಯ ರಸ್ತೆ, ಯಲಹಂಕ ನ್ಯೂ ಟೌನ್, ಬೆಂಗಳೂರು.-64 | 28562829 |
| (ಈಶಾನ್ಯ-1) | ಕೊಠಡಿ ಸಂಖ್ಯೆ 115, 1ನೇ ಮಹಡಿ, ಸುವರ್ಣಭವನ, 18ನೇ ಅಡ್ಡರಸ್ತೆ, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು. | 22945131 |
| (ಉತ್ತರ ವಿಲೇಜ್ -1) | 1ನೇ ಮಹಡಿ, 7ನೇ ಮುಖ್ಯ ರಸ್ತೆ, ಎಂ.ಇ.ಐ ಲೇಔಟ್, ಹೆರಸಘಟ್ಟ ರಸ್ತೆ. ಬೆಂಗಳೂರು-73 | 9845444068 |

**ಮೇಲೆ ತಿಳಸಲಾದ ಉಪವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಸೇವಾಠಾಣೆಗಳ ವಿವರ ಈ ಕೆಳಕಂಡಂತಿದೆ.**

| ಉಪವಿಭಾಗದ ಹೆಸರು | ಸೇವಾಠಾಣೆಗಳು |
|---|---|
| (ಪೂರ್ವ)-2-3 | ಬಾಣಸವಾಡಿ, ಓ.ಎಂ.ಬಿ.ಆರ್,ಲಿಂಗರಾಜಪುರಂ |
| (ಪೂರ್ವ)-1-2 | ಎ.ನಾರಾಯಣಪುರ, ದೊಡ್ಡನಕುಂದಿ,ವಿಜ್ಞಾನ ನಗರ, |
| (ದಕ್ಷಿಣ-2) | ಹೆಚ್.ಎಸ್. ಆರ್-1, ಕೋಡಿಚಿಕ್ಕನ ಹಳ್ಳಿ, |
| ( ಆಗ್ನೇಯ-4) | ಕೋರಮಂಗಲ 1 &2, ಬೆಳ್ಳಂದೂರು |
| (ಪಶ್ಚಿಮ-2) | ಕೆಂಗೇರಿ, ಐಡಿಯಲ್ ಹೋಮ್ಸ್, ಬಿ.ಇ.ಎಂ.ಎಲ್ ಲೇಔಟ್, ಆರ್.ಆರ್.ನಗರ |
| (ನೈರುತ್ಯ-2) | ಕತ್ರಿಗುಪ್ಪೆ, ಹೊಸಕೆರೆಹಳ್ಳಿ,ದೇವಗಿರಿ-1,ಇಟ್ಟಮಡು |

| | |
|---|---|
| **(ಆಗ್ನೇಯ-2)** | ಜೀವನ್ ಭೀಮಾನಗರ, ಹೆಚ್.ಎ.ಎಲ್ 2ನೇ ಹಂತ, ಇಂದಿರಾನಗರ, ಬೈಯ್ಯಪ್ಪನಹಳ್ಳಿ, ಸಿ.ವಿ.ರಾಮನ್‌ನಗರ, ಸದಾನಂದನಗರ |
| **(ವಾಯುವ್ಯ-3)** | ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ. ವಿ ಲೇಔಟ್, ಮೂಡಲಪಾಳ್ಯ |
| **(ಕೇಂದ್ರ-2)** | ಹೈಗ್ರೌಂಡ್ಸ್,(ಹೆಚ್.ಜಿ.ಆರ್), ಕೋಲ್ಸ್ ಪಾರ್ಕ್, |
| **(ಉತ್ತರ-2)** | ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು |
| **(ಈಶಾನ್ಯ-1)** | ಮಲ್ಲೇಶ್ವರಂ 1 & 2, ಶ್ರೀರಾಮಪುರ, ಯಶವಂತಪುರ1 & 2, ಭಾಷ್ಯಂಪಾರ್ಕ್ |
| **( ಉತ್ತರ ವಿಲೇಜ್ -1)** | ಶೆಟ್ಟಿಹಳ್ಳಿ, ಅಬ್ಬಿಗೆರೆ, ಚಿಕ್ಕಸಂದ್ರ, ಸಿಡೇದಹಳ್ಳಿ |

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳಬಹುದಾಗಿದೆ. ಹಾಗೂ **ಕೋವಿಡ್-19** ರ ಮಾರ್ಗದರ್ಶನದಂತೆ ಸಭೆಗೆ ಹಾಜರಾಗಲಿರುವ ಸಂದರ್ಭದಲ್ಲಿ ಎಲ್ಲಾ ಸುರಕ್ಷತೆಯನ್ನು ಕಾಪಾಡಿಕೊಳ್ಳುವುದು ಎಂದು ಬೆಂಗಳೂರು ಜಲಮಂಡಳಿ ಅಧಿಕೃತ ಪ್ರಕಟಣೆ ತಿಳಿಸಿದೆ.

## BWSSB:Water Adalath - Sub divisions on August 13th

*****

Bangalore, Aug 11 (Karnataka Information) : BWSSB water Adalath is held on 13.08.2020 in a AEE (East-2)-3, (East-1)-2, (South -2), (South East-4), (West-2), (South West-2), (South East-2), (North West-3), (Central -2), (North -2) ,(North East-1) and (North Village-1) sub divisions from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues. The details of the places where the Adalath is held is as follows.

| Sub-division | Address | Phone Number |
|---|---|---|
| (East-2)-3 | 1st Main Road, Kasturinagar,Bengalore-43 | 9845444058 |
| (East-1)-2 | A.Narayanapura Main Road, opp KR Puram Railway Station, Near Patalamma Temple, Hanuman Junction, A.Narayanapura. Bangalore-16 | 28510008 |

| | | |
|---|---|---|
| (South -2) | Near Water Tank, 100 feet Road, BTM 2nd Stage, Bangalore-76 | 40977432 |
| (South East-4) | 2nd Cross, 17th main, Koramangala 3rd Block, Bangalore-34 | 22945245 |
| (West-2) | 5th Stage, 1st main, BEML Layout,RR Nagar. Bangalore-98 | 28611826 |
| (South West-2) | Ground Floor, 1st Main, Banashankari 3rd Stage, Banagirinagar,Bangalore | 22945144 |
| (South East-2) | 10th Main Road, 7th Cross, Behind Indiranagar club, HAL 2nd Stage, Bangalore | 22945163 |
| (North West-3) | 5th Block, Outer Ring Road, Nagarabhavi, Bangalore | 23212181 |
| (Central -2) | Millers Road, High Grounds, Bangalore-52 | 22945191 |
| (North -2) | 1st Floor, pinakini Bhavan, Doddaballapura Main road, Yalahanka New Town, Bengalore -64 | 28562829 |
| (Nort East-1) | Room No.115, 1st Floor, Suvarna Bhavan, 18th cross, Margosa Road, Malleshwaram, Bangalore | 22945131 |
| (North Village -1) | 1st floor, 7th Main, MEI Layout, Hesaraghatta Road, Bangalore-73 | 9845444068 |

**The details of service stations coming under the subdivisions mentioned above are as follows:**

| **Sub-division** | **Service Stations** |
|---|---|
| (East-2)-3 | Banaswadi, OMBR, Lingarajapuram |
| (East-1)-2 | A.Narayanapura, Doddanakundi, Vignana nagar |
| (South -2) | HSR- 1,Kodichikkanahalli |
| (South East-4) | Koramangala 1 &2, Bellandur |
| (West-2) | Kengeri, Ideal Homes, BEML Layout, RR Nagar |
| (South West-2) | Katriguppe, Hosakerehalli, Devagiri-1, Ittamadu |
| (South East-2) | Jeevanbheemanagar, HAL 2nd Stage, Indiranagar, Byappanahalli, CV Raman Nagar, Sadanandanagar |
| (North West-3) | Nagarabhavi,Annapoorneshwarinagar, Sir.MV Layout, Moodalapalya |

| | |
|---|---|
| (Central -2) | High Grounds(HGR),coles Park |
| (North -2) | Yelahanka old town, Yelahanka New town,Attur |
| (North East-1) | Malleshwaram1&2, Srirampura, Yeshwanthapura 1&2, Bashyam park |
| (North Village -1) | Shettihalli, Abbigere, chikkasandra, sidedahalli |

For any problems regarding the water supply and all, public can contact 24x7 call centre number: 22238888, helpline number: 1916 & whats app no: 8762228888.Public can utilize this adalath facilities to solve the problems regarding water supply. And public are requested to follow all precautionary measures according to **COVID-19** guidelines while attending the adalath said official press.